# ಮಾಸ್ಕೋದಲ್ಲಿ ಉಗ್ರರಿಂದ ದಾಳಿ:ಮೃತರ ಸಂಖ್ಯೆ 115ಕ್ಕೆ ಏರಿಕೆ

ಮಾಸ್ಕೋದ ಕ್ರೋಕಸ್ ಸಿಟಿ ಹಾಲ್ ಕನ್ಸರ್ಟ್ ಮೇಲಿನ ದಾಳಿಯಲ್ಲಿ ಮೃತಪಟ್ಟವರ ಸಂಖ್ಯೆ 115ಕ್ಕೇರಿಕೆಯಾಗಿದೆ. ಇನ್ನು ದಾಳಿಯಲ್ಲಿ ನೇರವಾಗಿ ಭಾಗಿಯಾಗಿರುವ ನಾಲ್ವರು ಸೇರಿದಂತೆ ಹನ್ನೊಂದು ಉಗ್ರರನ್ನು ಬಂಧಿಸಲಾಗಿದೆ. ಶಾಸಕ ಅಲೆಕ್ಸಾಂಡರ್ ಖಿನ್ಷೀನ್ ಶನಿವಾರ ಟೆಲಿಗ್ರಾಮ್ನಲ್ಲಿ ಈ ವಿವರವನ್ನು ಪೋಸ್ಟ್ ಮಾಡಿದ್ದಾರೆ. ಇಸ್ಲಾಮಿಕ್ ಸ್ಟೇಟ್ ಖೊರಾಸನ್ ಭಯೋತ್ಪಾದಕರ ದಾಳಿಯಲ್ಲಿ ಸತ್ತವರ ಸಂಖ್ಯೆ 115ಕ್ಕೆಯಾಗಿದ್ದು 145 ಜನರು ಗಾಯಗೊಂಡಿದ್ದಾರೆ. ರಷ್ಯಾದ ಬ್ರಿಯಾನ್ಸ್ಕ್ ಪ್ರದೇಶದಲ್ಲಿ ಕಾರ್ಯಾಚರಣೆ ನಡೆಸಿದ ಬಳಿಕ ಇಬ್ಬರು ಉಗ್ರರನ್ನು ಬಂಧಿಸಲಾಗಿದೆ ಎಂದು ಖಿನ್‌ಸ್ತೀನ್ ಹೇಳಿದ್ದಾರೆ. ಉಳಿದ ಉಗ್ರರು ಕಾಲ್ನಡಿಗೆಯಲ್ಲಿ ಸಮೀಪದ ಅರಣ್ಯಕ್ಕೆ ಪರಾರಿಯಾಗಿದ್ದಾರೆ. ಉಗ್ರರ ದಾಳಿಯಿಂದಾಗಿ ಕ್ರೋಕಸ್ ಸಿಟಿ ಹಾಲ್ ನಲ್ಲಿ ಬೆಂಕಿಗಾಹುತಿಯಾಗಿದೆ. ದಟ್ಟವಾದ ಕಪ್ಪು ಹೊಗೆ ಗಾಳಿಯನ್ನು ತುಂಬಿದೆ. ಬೃಹತ್ ಸಭಾಂಗಣದಲ್ಲಿ ಗುಂಡೇಟಿನ ಶಬ್ದದ ನಡುವೆ ಭಯಭೀತರಾದ ಸ್ಥಳೀಯರು ಕಿರುಚಾಡುತ್ತಿರುವುದನ್ನು ವಿಡಿಯೋದಲ್ಲಿ ನೋಡಬಹುದು. ಶಸ್ತ್ರಸಜ್ಜಿತ ವ್ಯಕ್ತಿಗಳು ಗುಂಡು ಹಾರಿಸಿದ್ದು ಗ್ರೆನೇಡ್ ಅಥವಾ ಬೆಂಕಿಯಿಡುವ ಬಾಂಬ್ ಅನ್ನು ಎಸೆದಿದ್ದಾರೆ. ಖಖಖಖ–ಏ ಭಯೋತ್ಪಾದಕ ಗುಂಪನ್ನು 2015ರಲ್ಲಿ ಪಾಕಿಸ್ತಾನಿ ತಾಲಿಬಾನ್‌ನ ಅತೃಪ್ತ ಸದಸ್ಯರು ಸ್ಥಾಪಿಸಿದರು. ಈ ಗುಂಪಿನಲ್ಲಿ 2 ಸಾವಿರ ಸೈನಿಕರು ಇದ್ದಾರೆ. ನ್ಯೂಯಾರ್ಕ್ ಮೂಲದ ಭದ್ರತಾ ಸಲಹಾ ಸಂಸ್ಥೆ ಸೌಫಾನ್ ಗ್ರೂಪ್‌ನ ಭಯೋತ್ಪಾದನಾ ನಿಗ್ರಹ ವಿಶ್ಲೇಷಕ ಕಾಲಿನ್ ಪಿ ಕ್ಲಾರ್ಕ್, ಕಳೆದ ಎರಡು ವರ್ಷಗಳಿಂದ ಐಸಿಸ್–ಕೆ ರಷ್ಯಾವನ್ನು ಗುರಿಯಾಗಿಸಲು ಯೋಜಿಸುತ್ತಿದೆ ಎಂದು ಹೇಳಿದರು. ಸಂಘಟನೆ ತನ್ನ ಪ್ರಚಾರದಲ್ಲಿ ರಷ್ಯಾದ ಅಧ್ಯಕ್ಷ ವ್ಲಾಡಿಮಿರ್ ವಿ ಪುಟಿನ್ ಅವರನ್ನು ಆಗಾಗ್ಗೆ ಟೀಕಿಸುತ್ತದೆ.

## ತಮ್ಮಣ್ಣಾ ಕಿಲಾರಿ ನಿಧನ



ಯರಗಟ್ಟಿ: ಪಟ್ಟಣದ ನಿವಾಸಿ ತಮ್ಮಣ್ಣಾ ವೆಂಕಪ್ಪ (35) ಕಿಲಾರಿ ಶನಿವಾರ ನಿಧನ ಹೊಂದಿದರು. ಮೃತರು ತಂದೆ, ಪತ್ನಿ, ಸಹೋದರಿಯರು, ಇಬ್ಬರು ಪುತ್ರರು, ಒರ್ವ ಪುತ್ರಿಯರು ಹಾಗೂ ಅಪಾರ ಬಂಧುಗಳನ್ನು ಅಗಲಿದ್ದಾರೆ.

# ಡ್ಯಾನ್ಸ್ ಕರ್ನಾಟಕ ಡ್ಯಾನ್ಸ್ ಮತ್ತು ಕಾಮಿಡಿ ಕಿಲಾಡಿಗಳು ಮಹಾ ಆಡಿಷನ್

ಹೊಸಪೇಟ : ತನ್ನ ವಿಭಿನ್ನ ರಿಯಾಲಿಟಿ ಶೋಗಳ ಮೂಲಕ ಕರುನಾಡನ್ನ ರಂಜಿಸುತ್ತ ಬಂದಿರುವ ಜೀ ಕನ್ನಡ ವಾಹಿನಯು, ಈಗ ತನ್ನ ಹಿಟ್ ರಿಯಾಲಿಟಿ ಶೋಗಳಾದ ಡ್ಯಾನ್ಸ್ ಕರ್ನಾಟಕ ಡ್ಯಾನ್ಸ್ ಮತ್ತು ಕಾಮಿಡಿ ಕಿಲಾಡಿಗಳನ್ನ ಮತ್ತೆ ತೆರೆಗೆ ತರಲು ತಯಾರಿ ನಡೆಸಿದೆ. 7 ಸೀಸನ್‌ಗಳನ್ನ ಯಶಸ್ವಿಯಾಗಿ ಪೂರೈಸಿರುವ ಡ್ಯಾನ್ಸ್ ಕರ್ನಾಟಕ ಡ್ಯಾನ್ಸ್ ಈಗ ತನ್ನ 8 ನೇ ಆವೃತ್ತಿಯೊಂದಿಗೆ ಮತ್ತೆ ಕರುನಾಡನ್ನ ಕುಣಿಸಲು ತಯಾರಾಗಿದೆ.ಈಗಾಗಲೇ ಸಾಕಷ್ಟು ಯುವ ನೃತ್ಯ ನಿರ್ದೇಶಕರನ್ನ ಸ್ಯಾಂಡಲ್ ವುಡ್ಡಿಗೆ ನೀಡಿರುವ ಈ ರಿಯಾಲಿಟಿ ಶೋ ಮತ್ತಷ್ಟು ನೃತ್ಯ ನಿರ್ದೇಶಕರನ್ನ ಹುಟ್ಟು ಹಾಕುವ ಕೆಲಸವನ್ನ ಈ ಆವೃತ್ತಿಯಲ್ಲಿ ಮತ್ತೆ ಮಾಡಲಿದೆ.

ಇದರ ಜೊತೆಜೊತೆಗೆ ಸತತ 4 ಹಿಟ್ ಸೀಸನ್ನುಗಳನ್ನ ಕೊಟ್ಟಿರುವ ಕರುನಾಡಿನ ನೆಚ್ಚಿನ ರಿಯಾಲಿಟಿ ಶೋಗಳಲ್ಲಿ ಒಂದಾದ ಕಾಮಿಡಿ ಕಿಲಾಡಿಗಳು ಈಗಾಗಲೇ ಸಾಕಷ್ಟು ಕಾಮಿಡಿ ಕಲಾವಿದರನ್ನ ಕರುನಾಡಿಗೆ ನೀಡಿರುವುದು ಈಗ ಇತಿಹಾಸ.ವೇದಿಕೆಗಾಗಿ ಕಾಯುತ್ತಿರುವ ಅದೆಷ್ಟೋ ಹಾಸ್ಯ ನಟನಟಿಯರ ಕನಸನ್ನ ನನಸು ಮಾಡುತ್ತಿರುವ ಈ ರಿಯಾಲಿಟಿ ಶೋ ಈ ಬಾರಿ ಕಾಮಿಡಿ ಕಿಲಾಡಿಗಳು ಪ್ರೀಮಿಯರ್ ಲೀಗ್ ಎಂಬ ಹೊಸ ರೂಪದಲ್ಲಿ ಕರುನಾಡಿನ ಮುಂದೆ ಬರಲಿದೆ. ಈ ಹಂತದಲ್ಲಿ ಇದಕ್ಕೆ ಪೂರ್ವಬಾವಿ ತಯಾರಿ ಎಂಬಂತೆ ಆಡಿಷನ್ ಪ್ರಕ್ರಿಯೇ ಕರುನಾಡಿನಾದ್ಯಂತ ಶುರುವಾಗಿದೆ.ಇದೇ ಮಾರ್ಚ್ 25 ರಂದು ಸೋಮವಾರ ಬೆಳಿಗ್ಗೆ 9 ಗಂಟೆಯಿಂದ ಸಂಜೆ 6 ರವರೆಗೆ,ಡಾ.ಗೋಪಿನಾಥ್ ರಾವ್ ಸ್ಕೂಲ್,3 ನೇ ಕ್ರಾಸ್,3 ನೇ ವಾರ್ಡ್,ಪಟೇಲ್ ನಗರ, ಹೊಸಪೇಟ’.ಇಲ್ಲಿ ಆಡಿಷನ್ ನಡೆಯಲಿದೆ. ಆಡಿಷನಲ್ಲಿ ಭಾಗವಹಿಸಲು ಇಚ್ಚಿಸುವವರು ಅಡ್ರಸ್ ಪ್ರೂಪ್ ಜೆರಾಕ್ಸ್ ಜೊತೆ ಎರಡು ಪಾಸ್ ಪೋರ್ಟ್ ಸೈಜ್ ಪೋಟೊದೊಂದಿಗೆ ಆಡಿಷನ್ ಪ್ರಕ್ರಿಯೆಯಲ್ಲಿ ಭಾಗವಹಿಸಬಹುದಾ ಗಿದ್ದು,ಜೀ ಕನ್ನಡ ವಾಹಿನಯು ಈ ಆಡಿಷನ್ಗೆ ಯಾ ವುದೇ ಶುಲ್ಕ ವಿಧಿಸಿರುವುದಿಲ್ಲವೆಂದು ಸ್ಪಷ್ಟಪಡಿ ಸಿದೆ ಹಾಗು ವಾಹಿನಯ ಹೆಸರಲ್ಲಿ ಹಣ ಕೇಳುವವರ ವಿರುದ್ಧ ಶಿಸ್ತು ಕ್ರಮ ಜರುಗಿಸುವುದಾಗಿ ತಿಳಿಸಿದೆ.

# ಶ್ರೀ ಜಗದ್ಗುರು ರೇಣುಕಾಚಾರ್ಯರು ವಿಶ್ವ ಮಾನ್ಯರು



ಬೆಳಗಾವಿ: ಶ್ರೀ ಜಗದ್ಗುರು ರೇಣುಕಾಚಾರ್ಯರು ವಿಶ್ವ ಮಾನ್ಯರು. ಇವರು ನೀಡಿದ ಶ್ರೀ ಸಿದ್ಧಾಂತ ಶಿಖಾಮಣಿ ಎಲ್ಲರಿಗೂ ಮಾರ್ಗದರ್ಶಿಯಾಗಿದೆ ಎಂದು ಕಾರಂಜಿಮಠದ ಶ್ರೀ ಗುರುಸಿದ್ದ ಸ್ವಾಮೀಜಿ ಹೇಳಿದರು.

ಶನಿವಾರ ಸಂಜೆ ಲಕ್ಷ್ಮೀ ಟೆಕಡಿಯಲ್ಲಿರುವ ಹುಕ್ಕೇರಿ ಹಿರೇಮಠದ ಶಾಖೆಯಲ್ಲಿ ನಡೆದ ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವದ ಸಾನಿದ್ಯ ವಹಿಸಿ ಮಾತನಾಡಿದರು. ಶ್ರೀ ಜಗದ್ಗುರು ರೇಣುಕಾಚಾರ್ಯರು ನೀಡಿದ ಸಿದ್ಧಾಂತ ಶಿಖಾಮಣಿ 19 ಭಾಷೆಯಲ್ಲಿ ಲಭ್ಯವಿರುವುದು ಸಂತಸ ತಂದಿದೆ ಎಂದರು. ಅಧ್ಯಕ್ಷತೆ ವಹಿಸಿದ್ದ ಬೆಳಗಾವಿ ಹುಕ್ಕೇರಿ ಹಿರೇಮಠದ ಶ್ರೀ ಚಂದ್ರಶೇಖರ ಶಿವಾಚಾರ್ಯ ಸ್ವಾಮೀಜಿ ಅವರು ಮಾತನಾಡಿ, ಶ್ರೀ ಜಗದ್ಗುರು ರೇಣುಕಾ ಚಾರ್ಯರು ಕೇವಲ ಒಂದೇ ಜಾತಿಗೆ ಸೀಮಿತರಾದವರಲ್ಲ. ಎಲ್ಲಾ ಸಮುದಾಯವನ್ನು ಕೂಡ ತಮ್ಮ ಮಾರ್ಗದರ್ಶನದಲ್ಲಿ ಕರೆದು ಕೊಂಡು ಹೋದ ದಿವ್ಯ ಮಹಾತ್ಮರು. ಇವರ ಜಯಂತಿಯನ್ನು ನಾವೆಲ್ಲರೂ ಆಚರಿಸುತ್ತ ಅವರ ತತ್ವಗಳನ್ನು ಅಳವಡಿಸಿಕೊಳ್ಳುತ್ತ ಬಂದರೆ ಬದುಕು ಬಂಗಾರವಾಗುತ್ತದೆ ಎಂದರು.

ಈ ಸಂದರ್ಭದಲ್ಲಿ ಸುಮಂಗಲಾ ಶಿಂತ್ರೆ, ವಿಜಯ ಶಾಸ್ತ್ರೀಗಳು ಬೆಳಗಾವಿ, ಚಂದ್ರಶೇಖರಯ್ಯ ಸವಡಿ ಶ್ರೀ ಜಗದ್ಗುರು ರೇಣುಕಾಚಾರ್ಯರ ವಿಚಾರ ಕುರಿತು ಮಾತನಾಡಿದರು. ವೀರುಪಾಕ್ಷಯ್ಯ ನೀರಲಗಿಮಠ ನಿರೂಪಿಸಿದರು.

ಕಾರ್ಯಕ್ರಮದಲ್ಲಿ ನಗರದ ವೀರಶೈವ ಲಿಂಗಾಯುತ ಮುಖಂಡರು ಹಾಗೂ ರೋಟರಿ ಕ್ಲಬ್ ಆಫ್ ಬೆಳಗಾಮ್ ಸೆಂಟ್ರಲ್ ಸದಸ್ಯರು ಉಪಸ್ಥಿತರಿದ್ದರು.

# ಎಲ್ಲಾ ಅಧಿಕಾರಿಗಳು, ತಂಡಗಳು ಜಾಗೃತೆಯಿಂದ ಕಾರ್ಯನಿರ್ವಹಿಸಿ: ರಾಹುಲ್ ರತ್ನಂ ಪಾಂಡೆಯ



ಕೊಪ್ಪಳ, ಮಾರ್ಚ್ 23 : ಚುನಾವಣಾ ಮಾದರಿ ನೀತಿ ಸಂಹಿತೆ ಉಲ್ಲಂಘನೆಯಾಗದಂತೆ ಎಲ್ಲಾ ಅಧಿಕಾರಿ ಗಳು ಹಾಗೂ ತಂಡಗಳು ಅತ್ಯಂತ ಜಾಗೃತ’ಯಿಂದ ಕಾರ್ಯನಿರ್ವಹಿಸಬೇಕು ಎಂದು ಎಂ.ಸಿ.ಸಿ ನೋಡಲ್ ಅಧಿಕಾರಿಗಳು ಹಾಗೂ ಕೊಪ್ಪಳ ಜಿಲ್ಲಾ ಪಂಚಾ ಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ರಾಹುಲ್ ರತ್ನಂ ಪಾಂಡೆಯ ಅವರು ಹೇಳಿದರು.ಲೋಕಸಭಾ ಸಾರ್ವತ್ರಿಕ ಚುನಾವಣೆ–2024ರ ಸಂಬಂಧ ಮಾದರಿ ನೀತಿ ಸಂಹಿತೆ ಕುರಿತು ಪೊಲೀಸ್ ಅಧಿಕಾರಿಗಳು, ಚುನಾವಣೆ ಕರ್ತವ್ಯಕ್ಕೆ ನೇಮಕಗೊಂಡ ಸೆಕ್ಟರ್ ಅಧಿಕಾರಿಗಳು, ಎಸ್. ಎಸ್.ಟಿ ತಂಡ, ವಿಎಸ್ ಟಿ ತಂಡ, ಫ್ಲೈಯಿಂಗ್ ಸ್ಕ್ವಾಡ್ , ಮಾದರಿ ನೀತಿ ಸಂಹಿತೆ ನೋಡಲ್ ಅಧಿಕಾರಿಗಳು, ಸಹಾಯಕ ಚುನಾವಣಾ ಧಿಕಾರಿಗಳು ಹಾಗೂ ಇತರೆ ಅಧಿಕಾರಿ ಗಳಿಗಾಗಿ ಜಿಲ್ಲಾಡಳಿತ ಭವನದ ಅಡಿಟೋ ೀರಿಯಂ ಹಾಲ್‌ನಲ್ಲಿ ಶನಿವಾರ ಆಯೋಜಿಸಿದ್ದ ತರಬೇತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಚುನಾವಣಾ ಕರ್ತವ್ಯಕ್ಕೆ ನಯೋಜಿತ ಎಲ್ಲಾ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಭಾರತ ಚುನಾವಣಾ ಆಯೋಗದ ಮಾರ್ಗಸೂಚಿಗಳನ್ನು ಓದಿಕೊಳ್ಳಬೇಕು. ಚುನಾವಣಾ ತರಬೇತಿಗಳನ್ನು ಪ್ರತಿ ಚುನಾವಣೆಗಳಲ್ಲಿ ನೀಡಲಾಗುತ್ತದೆ. ನಮ್ಮ ಜಿಲ್ಲೆಯಲ್ಲಿ ತರಬೇತಿ ಪಡೆದ ಅಧಿಕಾರಿಗಳು ಚುನಾವಣೆ ಬಗ್ಗೆ ಸಂಪೂರ್ಣ ಮಾಹಿತಿ ತಿಳಿದುಕೊಂಡು ನೀವೆ ಸಂಪನ್ಮೂಲ ವ್ಯಕ್ತಿಗಳಾಗಬೇಕು. ಸಂಪನ್ಮೂಲ ವ್ಯಕ್ತಿಗಳಾಗಿ ಬೇರೆ ಜಿಲ್ಲೆಗಳಿಗೆ ಹೋಗಿ ಚುನಾವಣೆ ಕರ್ತವ್ಯದ ಬಗ್ಗೆ ಇತರರಿಗೆ ತರಬೇತಿ ನಡುವಂತಾಗಬೇಕು. ಹಾಗೇಯೆ ಈ ತರಬೇತಿಯಲ್ಲಿ ಯಾವುದೇ ಪ್ರಶ್ನೆಗಳು ಅಥವಾ ಗೊಂದಲ ಇದ್ದರೆ ಸಂಪನ್ಮೂಲ ವ್ಯಕ್ತಿಗಳಿಂದ ಬಗೆಹರಿಸಿಕೊಳ್ಳಿ ಎಂದು ತಿಳಿಸಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಯಶೋಧಾ ವಂಟಗೋಡಿ ಅವರು ಮಾತನಾಡಿ, ಚುನಾವಣೆ ಕಾರ್ಯಕ್ಕಾಗಿ ನಯೋಜಿತ ಅಧಿಕಾರಿಗಳು ಜವಾಬ್ದಾರಿಯುತವಾಗಿ ಕರ್ತವ್ಯ ನಿರ್ವಹಿಸಿ, ಯಾವುದೇ ಸಂದೇಹಗಳು ಬಂದರೆ ಕೇಳಿ ಪರಿಹರಿಸಿಕೊಳ್ಳಿ ಎಂದು ಅಧಿಕಾರಿಗಳಿಗೆ ತಿಳಿಸಿದರು.

ಕಾರ್ಯಕ್ರಮದಲ್ಲಿ ಸಂಪನ್ಮೂಲ ವ್ಯಕ್ತಿಗಳಾಗಿ ಆಗಮಿಸಿದ ಬೆಂಗಳೂರಿನ ಸಿಐಡಿ ಪಬ್ಲಿಕ್ ಪ್ರಾಸಿಕ್ಯೂಟರ್ ಮತ್ತು ಕಾನೂನು ಸಲಹೆಗಾರರಾದ ಮಹೇಶ್ ವಿ ವೈದ್ಯ ಅವರು ಮಾತನಾಡಿ, ಚುನಾವಣಾ ಮಾದರಿ ನೀತಿ ಸಂಹಿತೆ ಹಾಗೂ ಇದಕ್ಕೆ ಸಂಬಂಧಿಸಿದ ಕಾಯ್ದೆಗಳ ಬಗ್ಗೆ ಸರಿಯಾದ ಮಹಿತಿ ತಿಳಿದುಕೊಂಡು ಅದರಂತೆ ಕ್ರಮ ವಹಿಸಬೇಕು. ಚುನಾವಣೆಗೆ ಸಂಬಂಧಿಸಿದ ಸಭೆ, ಸಮಾರಂಭಗಳಿಗೆ ಅನುಮತಿ ಕಡ್ಡಾಯವಾಗಿದ್ದು, ಈ ಬಗ್ಗೆ ಪರಿಶೀಲಿಸಬೇಕು. ನೀತಿ ಸಂಹಿತೆ ಉಲ್ಲಂಘನೆಯಾಗದಂತೆ ನೋಡಿಕೊಳ್ಳಿ. ಚೆಕ್‌ಪೋಸ್ಟ್ ಗಳಲ್ಲಿ ವಾಹನಗಳ ತಪಾಸಣೆ ಸಂದರ್ಭದಲ್ಲಿ ವಿಡೀಯೋ ಚಿತ್ರೀಕರಣ ಮಾಡಿಕೊಳ್ಳಬೇಕು.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿಗಳಾದ ಸಾವಿತ್ರಿ ಬಿ ಕಡಿ, ಕ್ಯಾಪ್ಟನ್ ಮಹೇಶ್ ಮಾಲಗಿತ್ತಿ, ಅಪರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಹೇಮಂತ್ ಕುಮಾರ್ ಆರ್., ಜಿಲ್ಲಾ ತರಬೇತಿ ಸಂಸ್ಥೆಯ ಪ್ರಾಚಾರ್ಯರಾದ ಕೃಷ್ಣಮೂರ್ತಿ ದೇಸಾಯಿ ಸೇರಿದಂತೆ ಎಲ್ಲಾ ವಿಧಾನಸಭಾ ಕ್ಷೇತ್ರಗಳ ಸಹಾಯಕ ಚುನಾವಣಾಧಿಕಾರಿಗಳು, ತಹಶೀಲ್ದಾರರು, ಪೊಲೀಸ್ ಅಧಿಕಾರಿಗಳು, ಚುನಾವಣೆ ಸೆಕ್ಟರ್ ಅಧಿಕಾರಿಗಳು, ವಿವಿಧ ತಂಡಗಳು, ಮಾದರಿ ನೀತಿ ಸಂಹಿತೆ ನೋಡಲ್ ಅಧಿಕಾರಿಗಳು ಹಾಗೂ ಮತ್ತಿತರರು ಉಪಸ್ಥಿತರಿದ್ದರು.

*ತರಬೇತಿ ಕಾರ್ಯಕ್ರಮದಲ್ಲಿ ಜಿಲ್ಲಾ ಚುನಾವಣಾಧಿಕಾರಿಗಳ ಭೇಟಿ:* ಮಾದರಿ ನೀತಿ ಸಂಹಿತೆ ಕುರಿತು ವಿವಿಧ ಅಧಿಕಾರಿಗಳ ತರಬೇತಿ ಕಾರ್ಯಕ್ರಮ ಸ್ಥಳಕ್ಕೆ ಜಿಲ್ಲಾ ಚುನಾವಣಾಧಿಕಾರಿಗಳು ಹಾಗೂ ಜಿಲ್ಲಾಧಿಕಾರಿಗಳಾದ ನಲಿನ್ ಅತುಲ್ ಅವರು ಭೇಟಿ ನೀಡಿ, ವೀಕ್ಷಣೆ ಮಾಡಿ, ತರಬೇತಿಯ ಸದುಪಯೋಗ ಪಡೆದುಕೊಂಡು ಚುನಾವಣಾ ಕಾರ್ಯವನ್ನು ಅಚ್ಚುಕಟ್ಟಾಗಿ ನಿರ್ವಹಿಸಬೇಕು ಎಂದು ಸಲಹೆ ನೀಡಿದರು.

# ನಿಮ್ಮ ಮನೆ ಮಗಳಿಗೆ ಆರ್ಶಿವದಿಸಿ ಪ್ರೀಯಾಂಕ ಜಾರಕಿಹೊಳಿ



ಯಮಕನಮರಡಿ: ಬರುವ ಮೇ 07 ರಂದು ನಡೆಯಲಿರುವ ಲೋಕಸಭಾ ಚುನಾವಣೆಯಲ್ಲಿ ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದಿಂದ ಕಾಂಗ್ರೇಸ್ ಅಭ್ಯರ್ಥಿಯಾಗಿ ನಾನು ಚುನಾವಣೆಗೆ ಸ್ಪರ್ದಿಸಿದ್ದೇನೆ. ನಮ್ಮ ಮನೆ ಮಗಳಾದ ನನಗೆ ತಮ್ಮ ಅಮೂಲ್ಯ ಮತ ನೀಡಿ ಆರ್ಶಿವದಿಸಬೇಕೆಂದು ಚಿಕ್ಕೋಡಿ ಲೋಕಸಭಾ ಕಾಂಗ್ರೇಸ್ ಅಭ್ಯರ್ಥಿ ಪ್ರಿಯಾಂಕಾ ಜಾರಕಿಹೊಳಿ ಕಾರ್ಯಕರ್ತರಲ್ಲಿ ಮನವಿ ಮಾಡಿಕೊಂಡರು. ಅವರು ಶನವಾರ ದಿ. 23 ರಂದು ಹತ್ತರಗಿ ಗ್ರಾ.ಪಂ. ವ್ಯಾಪ್ತಿಗೆ ಬರುವ ಆನಂದಪೂರ ಗ್ರಾಮದಲ್ಲಿ ಕಾಂಗ್ರೇಸ್ ಕಾರ್ಯಕರ್ತರನ್ನು ಉದ್ದೇಶಿಸಿ ಮಾತನಾಡಿದರು. ನಮ್ಮ ತಂದೆಯುವರಾದ ಸತೀಶ ಜಾರಕಿಹೊಳಿಯವರು ಸರ್ಕಾರದ ಪ್ರತಿಯೊಂದು ಯೋಜನೆಗಳನ್ನು ಯಮಕನಮರಡಿ ಮತಕ್ಷೇತ್ರಕ್ಕೆ ಮಂಜೂರು ಮಾಡಿಸಿ ಯಶಸ್ವಿಯಾಗಿ ಅನುಷ್ಠಾನಗೊಳಿಸಿದ್ದಾರೆ. ಯಮಕನಮರಡಿ ಮತಕ್ಷೇತ್ರವು ರಾಜ್ಯದಲ್ಲಿಯೇ ಅಭಿವೃದ್ದಿಯಲ್ಲಿ ಹೆಸರುವಾಸಿಯಾದ ಕ್ಷೇತ್ರವಾಗಿದೆ. ಅದರಂತೆ ಚಿಕ್ಕೋಡಿ ಲೋಕಸಭಾ ವ್ಯಾಪ್ತಿಗೆ ಬರುವ ಎಲ್ಲ ಗ್ರಾಮಗಳ ಸರ್ವಾಂಗೀಣ ಅಭಿವೃದ್ದಿಗಾಗಿ ನನಗೆ ಮತ ನೀಡಿ ಆರ್ಶಿವದಿಸಬೇಕು ಎಂದು ಹೇಳಿದರು. ಯುವ ದುರೀಣ ರಾಹುಲ ಜಾರಕಿಹೊಳಿ ಮಾತನಾಡಿ ಕಾಂಗ್ರೇಸ್ ಸರ್ಕಾರವು ಚುನಾವಣೆಯಲ್ಲಿ ನೀಡಿರುವ ಭರವಸೆಗಳನ್ನು ಈಡೇರಿಸಿದ್ದು, ಜನರಿಗೆ ಗ್ಯಾರಂಟಿ ಯೋಜನೆಗಳ ಮೂಲಕ ನುಡಿದಂತೆ ನಡೆದ ಏಕೈಕ ಸರ್ಕಾರವಾಗಿದೆ. ಚಿಕ್ಕೋಡಿ ಲೋಕಸಭಾ ಸಂಸದರು ಅಭಿವೃದ್ದಿ ಕಾರ್ಯಗಳನ್ನು ಮಾಡಿಲ್ಲಿ ಅಭಿವೃದ್ದಿಗಾಗಿ ಪ್ರೀಯಾಂಕಾ ಜಾರಕಿಹೊ ಳಿಯವರನ್ನು ಬೆಂಬಲಿಸಬೇಕೆಂದು ಹೇಳಿದರು. ಕಾಂಗ್ರೇಸ್ ಮುಖಂಡ ರವೀಂದ್ರ ಜಿಂಡ್ರಾಳಿ ಮಾತನಾಡಿ ಯುವ ಪದವಿದರರಾದ ಪ್ರೀಯಾಂಕಾ ಜಾರಕಿಹೊಳಿಯವರು ಕೋವಿಡ ಸಂಧರ್ಭದಲ್ಲಿ ಯಮಕನಮರಡಿ ಕ್ಷೇತ್ರದಲ್ಲಿ ಸಂಚರಿಸಿ ಅವರ ಕಷ್ಟಗಳಿಗೆ ಸ್ಪಂದಿಸಿ ಕೆಲಸ ಮಾಡಿದ್ದಾರೆ. ಸಾಮಾಜಿಕ ಕ್ಷೇತ್ರದಲ್ಲೂ ಅವರು ಸಾಕಷ್ಟು ಅಭಿವೃದ್ದಿ ಕೆಲಸ ಮಾಡಿದ್ದಾರೆ. ಸರಳ ಸಜ್ಜನಕೆಯಾದ ಸಮಾಜಿಕ ಕಳಕಳಿಯುವಳ್ಳ ಪ್ರೀಯಾಂಕಾ ಜಾರಕಿ ಹೊಳಿಯವರನ್ನು ಚಿಕ್ಕೋಡಿ ಲೋಕಸಭಾ ವ್ಯಾಪ್ತಿಗೆ ಬರುವ ಗ್ರಾಮಗಳ ಅಭಿವೃದ್ದಿಗಾಗಿ ಆಯ್ಕೆ ಮಾಡು ವುದು ಇಂದು ಅನವಾರ್ಯವಾಗಿದ್ದ, ಪ್ರೀಯಾಂಕಾ ಜಾರಕಿಹೊಳಿಯವರನ್ನು ಅತ್ಯಧಿಕ ಮತಗಳನ್ನು ನೀಡಿ ಆರಿಸಿ ತರುವ ಮೂಲಕ ದೇಶದಲ್ಲಿ ಹೊಸ ಇತಿಹಾಸ ಸೃಷ್ಠಿ ಮಾಡೋಣ ಎಂದು ಹೇಳಿದರು. ಯಮಕನಮರಡಿ ಬ್ಲಾಕ ಕಾಂಗ್ರೇಸ್ ಅಧ್ಯಕ್ಷ ಮಹಾಂತೇಶ ಮಗದಮ್ಮು, ಹತ್ತರಗಿ ಗ್ರಾ.ಪಂ. ಮಾಜಿ ಅಧ್ಯಕ್ಷ ಮಹಾ ದೇವ ಪಟೋಳಿ ಮಾತನಾಡಿದರು. ಈ ವೇಳೆಯಲ್ಲಿ ಹುಕ್ಕೇರಿ ಗ್ರಾಮೀನ ವಿದ್ಯುತ ಸಂಘದ ನಿರ್ದೇಶಕ ಜೋಮಲಿಂಗ ಪಟೋಳಿ, ಹತ್ತರಗಿ ಗ್ರಾ.ಪಂ. ಅಧ್ಯಕ್ಷ ಸಮೀರ ಬೇಪಾರಿ, ವಿಠ್ಠಲ ಖಡಗಾಂವಿ, ಈರಣ್ಣಾ ಕುಡಚಿ, ಇನ್ನೀತರರು ಉಪಸ್ಥಿತರಿದ್ದರು. ಸಂತೋಷ ಅತ್ತಿಮರದ ಸ್ವಾಗತಿಸಿ ಕಾರ್ಯಕ್ರಮ ನರೂಪಿಸಿದರು.

# ಪೋಕ್ಸೋ ಪ್ರಕರಣ: ಆರೋಪಿಗಳಿಗೆ 10 ವರ್ಷಗಳ ಜೈಲು ಶಿಕ್ಷೆ ಪ್ರಕಟ

ಕೊಪ್ಪಳ, ಮಾರ್ಚ್ 23 : ಅಪ್ರಾಪ್ತ ವಯಸ್ಸಿನ ಬಾಲಕಿಯನ್ನು ಅಪಹರಿಸಿ, ಅತ್ಯಾಚಾರ ಎಸಗಿದ ಆರೋಪ ಸಾಬೀತಾದ ಹಿನ್ನೆಲೆಯಲ್ಲಿ ಆರೋಪಿಗಳಿಗೆ 10 ವರ್ಷಗಳ ಜೈಲು ಶಿಕ್ಷೆ ವಿಧಿಸಿ ಕೊಪ್ಪಳ ಹೆಚ್ಚುವರಿ ಜಿಲ್ಲಾ ಹಾಗೂ ಸತ್ರ ನ್ಯಾಯಾಲಯ ಹಾಗೂ ತ್ವರಿತ ವಿಲೇವಾರಿ ನ್ಯಾಯಾಲಯ(ಪೋಕ್ಸೋ)ವು ತೀರ್ಪು ಪ್ರಕಟಿಸಿದೆ.ೊಪ್ಪಳದ ಮುನಿರಾಬಾದ್ ಠಾಣೆ ವ್ಯಾಪ್ತಿಯ ಹುಲಗಿಯ ಹುಲಿಗೆಮ್ಮ ದೇವಸ್ಥಾನ ಹತ್ತಿರ ಜಾತ್ರೆ ಸಲುವಾಗಿ ಹಾಕಿದ ಮನರಂಜನೆ ಆಟದ ತೊಟ್ಟಿಲು ಹತ್ತಿರ ಹಾಗೂ ರೈಲ್ವೆ ಹಳಿ ಪಕ್ಕದಲ್ಲಿ ಪ್ಲಾಸ್ಟಿಕ್ ಬಾಟಲಿಗಳನ್ನು ಆರಿಸುತ್ತಿದ್ದ ಅಪ್ರಾಪ್ತ ಬಾಲಕಿಯನ್ನು ಕಂಡ ಅಪರಾಧಿಗಳಾದ ಎ–1 ಶಬ್ಬೀರ, ಎ–2 ಕಾರ್ತಿಕ ಈ ಇಬ್ಬರೂ ದುಡ್ಡು ಕೊಡುತ್ತೇವೆ ನಮ್ಮೊಂದಿಗೆ ಬಾ ಎಂದು ಬಾಲಕಿಯನ್ನು ಅಪಹರಿಸಿ, ಒತ್ತಾಯ ಪೂರ್ವಕವಾಗಿ ಕರೆದುಕೊಂಡು ಹೋಗಿ ಅವಳಿಗೆ ಐಸ್ ಕ್ರೀಮ್, ಚಾಕಲೇಟ್ ಕೊಟ್ಟು ತುಂಗಭದ್ರಾ ಹೊಳೆ ಹಿಂದೆ ಹೊಸೂರು ರಸ್ತೆಯಲ್ಲಿರುವ ಒಂದು ಕಬ್ಬಿನ ಗದ್ದೆಗೆ ಕರೆದುಕೊಂಡು ಹೋಗಿ ಅಲ್ಲಿ ಅಪರಾಧಿಗಳು ಬಾಧಿತಳ ಮೇಲೆ ಬಲವಂತದ ಅತ್ಯಾಚಾರ ಮಾಡಿದ ಆರೋಪ ತನಿಖೆಯಲ್ಲಿ ಸಾಭಿತಾಗಿದ್ದರಿಂದ ಕೊಪ್ಪಳ ಪೊಲೀಸ್ ಉಪಾಧೀಕ್ಷಕರಾದ ಶ್ರೀಕಾಂತ ಕಟ್ಟಿಮನಿ ಅವರು ಅಪರಾಧಿಗಳ ವಿರುದ್ಧ ನ್ಯಾಯಾಲಯಕ್ಕೆ ದೋಷಾರೋಪಣೆ ಪಟ್ಟಿ ಸಲ್ಲಿಸಿದ್ದರು.ಪ್ರಕರಣವು ವಿಚಾರಣೆಯಲ್ಲಿ ಅಪರಾಧಿಗಳ ಮೇಲಿನ ಆರೋಪಣೆಗಳು ಸಾಭೀತಾಗಿದೆ ಎಂದು 10 ವರ್ಷಗಳ ಜೈಲು ಶಿಕ್ಷೆ ಹಾಗೂ ರೂ.35,000 ಗಳ ದಂಡವನ್ನು ವಿಧಿಸಿ, ಕೊಪ್ಪಳ ಹೆಚ್ಚುವರಿ ಜಿಲ್ಲಾ ಹಾಗೂ ಸತ್ರ ನ್ಯಾಯಾಧೀಶರು ಹಾಗೂ ತ್ವರಿತ ವಿಲೇವಾರಿ (ಪೋಕ್ಸೋ) ನ್ಯಾಯಾಧೀಶರಾದ ಕುಮಾರ ಡಿ.ಕೆ. ಅವರು ತೀರ್ಪು ಹೊರಡಿಸಿರುತ್ತಾರೆ. ಪ್ರಕರಣದಲ್ಲಿ ಸರ್ಕಾರದ ಪರವಾಗಿ ಪ್ರಧಾನ ಸರ್ಕಾರಿ ಅಭಿಯೋಜಕರಾದ ಬಂಡಿ ಅಪರ್ಣಾ ಮನೋಹರ ಅವರು ವಾದ ಮಂಡಿಸಿದ್ದರು ಎಂದು ನ್ಯಾಯಾಲಯದ ಪ್ರಕಟಣೆ ತಿಳಿಸಿದೆ.

# ಶ್ರೀರಾಮನಗರ: ಮೌಲಾನಾ ಆಜಾದ್ ಮಾದರಿ ಶಾಲೆ ಪ್ರವೇಶಕ್ಕೆ ಅರ್ಜಿ ಆಹ್ವಾನ

ಕೊಪ್ಪಳ, ಮಾರ್ಚ್ 23 : ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ 2024–25ನೇ ಸಾಲಿಗಾಗಿ ಗಂಗಾವತಿ ತಾಲೂಕಿನ ಶ್ರೀರಾಮನಗರದ ಅಲ್ಪಸಂಖ್ಯಾತರ ಮೌಲಾನಾ ಆಜಾದ್ ಮಾದರಿ ಆಂಗ್ಲ ಮಾಧ್ಯಮ ಶಾಲೆಯಲ್ಲಿ 6ನೇ ತರಗತಿಯ ಪ್ರವೇಶಕ್ಕಾಗಿ ಅರ್ಹ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಸಲಾಗಿದೆ.ಅರ್ಜಿ ಸಲ್ಲಿಸಲು ವಿದ್ಯಾರ್ಥಿಗಳು 5ನೇ ತರಗತಿಯಲ್ಲಿ ಉತ್ತೀರ್ಣ ರಾಗಿರಬೇಕು. ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ, ಡಾ ಎ.ಪಿ.ಜೆ. ಅಬ್ದುಲ್ ಕಲಾಂ ವಸತಿ ಶಾಲೆಯಲ್ಲಿ ಶೇ.75 ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ಮತ್ತು ಶೇ.25 ಇತರೆ ವರ್ಗದವರಿಗೆ ಮೀಸಲಿಡಲಾಗಿದ್ದು, ಅಲ್ಪಸಂಖ್ಯಾತರ ವರ್ಗದ ಅಭ್ಯರ್ಥಿಗಳ ಕುಟುಂಬದ ವಾರ್ಷಿಕ ಆದಾಯ ಹಾಗೂ ಪ್ರವರ್ಗ–1ಕ್ಕೆ ಸೇರಿದ ಅಭ್ಯರ್ಥಿಗಳ ಕುಟುಂಬದ ವಾರ್ಷಿಕ ಆದಾಯ 2.50 ಲಕ್ಷ ಮಿತಿಯೊಳಗಿರಬೇಕು.

ಹಿಂದುಳಿದ ವರ್ಗಗಳ 2ಎ, 3ಎ ಮತ್ತು 3ಬಿ ಅಭ್ಯರ್ಥಿಗಳ ಹಾಗೂ ಪ್ರವರ್ಗ–1ಕ್ಕೆ ಸೇರಿದ ಅಭ್ಯರ್ಥಿಗಳ ಕುಟುಂಬದ ವಾರ್ಷಿಕ ಆದಾಯ 2.50 ಲಕ್ಷ ಮಿತಿಯೊಳಗಿರಬೇಕು. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಅಭ್ಯರ್ಥಿಗಳ ಕುಟುಂಬದ ವಾರ್ಷಿಕ ಆದಾಯ 2.50 ಲಕ್ಷ ಮಿತಿಯೊಳಗಿರಬೇಕು. ಅಂಗವಿಕಲ ವಿದ್ಯಾರ್ಥಿಗಳಿಗೆ ಶೇ.05, ಮಾಜಿ ಸೈನಕರಿಗೆ ಶೇ.04 ಕಾಯ್ದಿರಿಸಲಾಗಿದೆ. ವಿಶೇಳ ದುರ್ಬಲ ವರ್ಗ ಶೇ.05, ಸಫಾಯಿ ಕರ್ಮಚಾರಿ ವಿದ್ಯಾರ್ಥಿಗಳಿಗೆ ಶೇ.05ರಷ್ಟು ಸ್ಥಾನಗ’ಳನ್ನು ಕಾಯ್ದಿರಿಸಲಾಗಿದೆ.ನಿಗದಿತ ಅರ್ಜಿ ನಮೂನೆಯನ್ನು ಭರ್ತಿ ಮಾಡಿದ ಅರ್ಜಿಯೊಂದಿಗೆ ಕಂದಾಯ ಇಲಾಖೆಯ ತಹಶೀಲ್ದಾರ ನೀಡಿದ ಜಾತಿ ಮತ್ತು ಆದಾಯ ದೃಢೀಕರಣ ಪ್ರಮಾಣ ಪತ್ರ, ವಾಸಸ್ಥಳ ಪ್ರಮಾಣ ಪತ್ರ, ಆಧಾರ್ ಕಾರ್ಡ್ ಹಾಗೂ ವಿದ್ಯಾರ್ಥಿ ಪಾಸ್‌ಪೋರ್ಟ್ ಅಳತೆಯ ಇತ್ತೀಚಿನ 4 ಭಾವಚಿತ್ರಗಳೊಂದಿಗೆ ಪೋಳಕರು ಅಥವಾ ವಿದ್ಯಾರ್ಥಿಗಳು ನೇರವಾಗಿ ಎಲ್ಲಾ ದಾಖಲೆಗಳೊಂದಿಗೆ ಶ್ರೀರಾಮನಗರ ಮೌಲಾನಾ ಆಜಾದ್ ಶಾಲೆಯ ಮುಖ್ಯೋಪಾಧ್ಯಾಯರಿಗೆ ಸಂಪರ್ಕಿಸಿ ಏಪ್ರಿಲ್ 16 ರೊಳಗೆ ಅರ್ಜಿ ಸಲ್ಲಿಸಬೇಕು. ಅಪೂರ್ಣವಾದ ಮತ್ತು ತಡವಾಗಿ ಬಂದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ಅಲ್ಪಸಂಖ್ಯಾತರ ಮೌಲಾನಾ ಆಜಾದ್ ಮಾದರಿ ಆಂಗ್ಲ ಮಾಧ್ಯಮ ಶಾಲೆ ಶ್ರೀರಾಮನಗರ ಮೊ.ಸಂ: 9880026927 ಅಥವಾ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಕೊಪ್ಪಳ ದೂ.ಸಂ: 08539–225070 ಗೆ ಸಂಪರ್ಕಿಸಬಹುದು ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪ್ರಸವಶಾಸ್ತ್ರದಲ್ಲಿ ಹೊಸ ಆವಿಷ್ಕಾರ :ರಾಷ್ಟ್ರೀಯ ಸಮ್ಮೇಳನದಲ್ಲಿ 11 ರಾಜ್ಯಗಳ ಪ್ರತಿನಿಧಿಗಳು




ಬೆಳಗಾವಿ: ನಗರದ ಕೆ.ಎಲ್.ಇ. ಸ್ವಾಯತ್ತ ವಿಶ್ವವಿದ್ಯಾಲದ ಶುಶ್ರೂಷಾ ಮಹಾವಿದ್ಯಾಲಯವು, ಸೊಸೈಟಿಆಫ್ ಮಿಡವೈವ್ಸನ ಸಹಯೋಗದಲ್ಲಿ ಹಾಗೂ ಟ್ರೆನಡ್ ನರ್ಸಸ್ ಅಸೋಸಿಯೇಷನ ಆಫ್‌ಇಂಡಿಯಾದ ಬೆಂಬಲದೊಂದಿಗೆರಾಷ್ಟ್ರೀಯ ಸಮ್ಮೇಳನವನ್ನು ಕೆ.ಎಲ್.ಇ, ಜೆ.ಎನ್.ಎಮ್.ಸಿ ಸಭಾಂಗಣದಲ್ಲಿ “ ಪ್ರಸವಶಾಸ್ತ್ರದಲ್ಲಿ ಹೊಸ ಆವಿಷ್ಕಾರ ಮತ್ತುತಾಯಿ ಹಾಗು ನವಜಾತ ಶಿಶುವಿನ ಆರೈಕೆಯಲ್ಲಿ ಪ್ರಗತಿ” ಎಂಬ ಶೀರ್ಷಿಕೆಯೊಂದಿಗೆ ದಿನಾಂಕ 22/03/2024 ರಿಂದ 23/03/2024 ರವರೆಗೆಆಯೋಜಿಸಲಾಗಿತ್ತು.

ಈ ಎರಡು ದಿನಗಳಲ್ಲಿ ಉಪನ್ಯಾಸ, ಫಲಕಚರ್ಚೆ, ಪೇಪರ್ ಹಾಗು ಪೊಸ್ಟರ್ ಪ್ರದರ್ಶನ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳು ಆಯೋಜನೆಗೊಂಡಿದ್ದವು.ಭಾರತದಕರ್ನಾಟಕ, ಮಹಾರಾಷ್ಟ್ರ, ಗೋವಾ, ಬಿಹಾರ, ಗುಜರಾತ, ತೆಲಂಗಾಣ, ಆಂಧ್ರಪ್ರದೇಶ, ಹರಿಯಾಣ, ಉತ್ತರ ಪ್ರದೇಶ, ಪಶ್ಚಿಮ ಬಂಗಾಳ, ಪುದುಚೇರಿ ಮತ್ತು ತಮಿಳುನಾಡು ರಾಜ್ಯಗಳಿಂದ ಸುಮಾರು 586 ಪ್ರತಿನಿಧಿಗಳು, ಉನ್ನತ ಸಂಪನ್ಮೂಲ ವ್ಯಕ್ತಿಗಳು, ಪ್ರಸವಶಾಸ್ತ್ರದ ಶಿಕ್ಷಣ ತಜ್ಞರು, ಶುಶ್ರೂಷಾ ಅಧಿಕಾರಿಗಳು, ಅಧ್ಯಾಪಕರು ಮತ್ತು ಪಿಎಚ್.ಡಿ ವಿದಾಂಸರುಹಾಗೂಸದರ್ನಕ್ರಾಸ್ ವಿಶ್ವವಿದ್ಯಾಲಯ, ಆಸ್ಟ್ರೇಲಿಯಾದಅಧ್ಯಾಪಕರು ಮತ್ತು ವಿದ್ಯಾರ್ಥಿಗಳು ಸಹ ಸಮ್ಮೇಳನದಲ್ಲಿ ಭಾಗವಹಿಸಿದ್ದರು. ಡಾ॥ ಉಷಾ ಉಕಾಂಡೆ, ಅಧ್ಯಕ್ಷರು. ಸೊಸೈಟಿಆಫ್‌ಅಬ್ಸ್ಟೆಟ್ರಿಕ್, ಭಾರತ, ಅವರು ಪ್ರಸವಶಾಸ್ತ್ರದ ಸವಾಲುಗಳ ಕುರಿತುತಮ್ಮ ಪ್ರಮುಖಟಿಪ್ಪಣಿಯೊಂದಿಗೆ ಸಭೆಯನ್ನು ಆರಂಭಿಸಿದರು.ಶ್ರೀಮತಿ ಶೀತಲ ಸ್ಯಾಮ್ಸನ್, ಪ್ರಸವಶಾಸ್ತ್ರದ ಶಿಕ್ಷಣ ತಜ್ಞರು, ರಾಷ್ಟ್ರೀಯ ಪ್ರಸವಶಾಸ್ತ್ರತರಬೇತಿ ಸಂಸ್ಥೆ, ಫರ್ನಾಂಡಿಸ್ ಫೌಂಡೇಶನ, ಹೈದರಾಬಾದ್, ಅವರು ಪ್ರಸವಶಾಸ್ತ್ರದ ಮಹತ್ವ ಮತ್ತು ನೈಸರ್ಗಿಕ ಹೆರಿಗೆಯಲ್ಲಿಅದರ ಪಾತ್ರದಕುರಿತುಉಪನ್ಯಾಸ ನೀಡಿದರು.ಡಾ॥ ಪ್ರೀತಿ.ಕೆ.ದೊಡ್ಡವಾಡ, ಮುಖ್ಯ ಸಂಯೊಜಕರು, ಕೆ.ಎಲ್.ಇ. ಸೊಸೈಟಿಯ ಸ್ವಶಕ್ತಿ ಮಹಿಳಾ ಸಬಲಿಕರಣ ಕೋಶ, ಬೆಳಗಾವಿ, ಕೆ.ಎಲ್.ಇ. ಸ್ವಾಯತ್ತ ವಿಶ್ವವಿದ್ಯಾಲಯಅವರು ಮಹಿಳೆಯರ ಆರೋಗ್ಯವನ್ನು ಹೆಚ್ಚಿಸುವಲ್ಲಿ ಸರ್ಕಾರೇತರ ಸಂಸ್ಥೆಗಳ ಪಾತ್ರದ ಬಗ್ಗೆ ಮಾತನಾಡಿದರು.

ಸಮ್ಮೇಳನದ ಇತರ ಸಂಪನ್ಮೂಲ ವ್ಯಕ್ತಿಗಳಾದ ಡಾ.ರಮ್ಯಾಚಿದಂಬರನ್, ಪ್ರಾಂಶುಪಾಲರು, ಲಿಸಿಯೆಕ್ಸ ಶುಶ್ರೂಷಾ ಮಹಾವಿದ್ಯಾಲಯ, ಎರ್ನಾಕುಲಂ, ಕೇರಳ, ಪ್ರೊ.(ಡಾ). ಜ್ಯೋತಿ ನಾಯ್ಕರೆ, ಪ್ರಾಂಶುಪಾಲರು, ಸಿಂಹಗಡ ಶುಶ್ರೂಷಾ ಮಹಾವಿದ್ಯಾಲಯ, ಪುಣೆ, ಮಹಾರಾಷ್ಟ್ರ, ಶ್ರೀಮತಿ ಸಾರಾಕಾಕ್ಸನ್, ನಿರ್ದೇಶಕಿ, ಮಿಡವೈಪರಿ ಇನಿಶೇಯೇಟಿವ್ಸ, ಆಸ್ತ್ರೀಕಾ ಫೌಂಡೇಶನ್, ಬೆಂಗಳೂರು ಮತ್ತುಡಾ. ರೀನಾ ವಿಲ್ಮಾ ಫ್ರಾಂಕ್, ಸಹ ಪ್ರಾಧ್ಯಾಪಕರು, ಫಾದರ್ ಮುಲ್ಲರ್ ಶುಶ್ರೂಷಾ ಮಹಾವಿದ್ಯಾಲಯ, ಮಂಗಳೂರು ಅವರೆಲ್ಲ ಅತ್ಯುತ್ತಮ ಉಪನ್ಯಾಸವನ್ನು ನೀಡಿದರು. ಕೆ.ಎಲ್.ಇ. ಸ್ವಾಯತ್ತ ವಿಶ್ವವಿ ದ್ಯಾಲಯ ಬೆಳಗಾವಿಯ, ಶುಶ್ರೂಷಾ ಮಹಾವಿದ್ಯಾ ಲಯದ ಪ್ರಾಂಶುಪಾಲರಾದ ಪ್ರೊ.(ಡಾ).ವಿರೇಶಕುಮಾರ ನಂದಗಾವಅವರು ಸರ್ವರನ್ನು ಸ್ವಾಗತಿಸಿ ಗಣ್ಯರನ್ನು ಪರಿಚಯಿಸಿದರು. ಈ ವೇಳೆ ವೇದಿಕೆ ಮೇಲೆ ಆಸಿರಾಗಿದ್ದ ಗಣ್ಯರು ಪ್ರಸವಪೂರ್ವ ಶಿಕ್ಷಣ ಮತ್ತು ನವಜಾತ ಶಿಶುವಿನ ಆರೈಕೆಯ ಮಾಡ್ಯೂಲ್ಗಳನ್ನು ಬಿಡುಗಡೆಮಾಡಿದರುಕಾರ್ಯ ಕ್ರಮಕ್ಕೆ ಮುಖ್ಯ ಅತಿಥಿಗಳಾಗಿ ಆಗಮಿಸಿ ದ್ದಕೆ.ಎಲ್.ಇ. ಸ್ವಾಯತ್ತ ವಿಶ್ವವಿದ್ಯಾಲಯದ ಕುಲಪತಿ ಗಳಾದ ಡಾ.ನತಿನ್ ಗಂಗನೆ ಅವರುತಮ್ಮ ನುಡಿಗಳಲ್ಲಿ ಶುಶ್ರೂಷಾ ಶಿಕ್ಷಣದ ಎಲ್ಲಾ ಹಂತಗಳು ಆರೋಗ್ಯರಕ್ಷಣೆಯಅತ್ಯಗತ್ಯ ಭಾಗಗಳಾಗಿವೆ ಎಂದು ಹೇಳಿದರು ಮತ್ತು ಆರೋಗ್ಯವಂತ ತಾಯಿ ಮತ್ತು ಆರೋ ಗ್ಯವಂತ ಮಕ್ಕಳು ಆರೋಗ್ಯವಂತ ಪೀಳಿ ಗೆಗೆ ದಾರಿ ಮಾಡಿಕೊಡಿತ್ತಾರೆ ಎಂದು ತಿಳಿಸಿದರು.ಡಾ॥ ಉಷಾ ಉಕಾಂಡೆ, ಅಧ್ಯಕ್ಷರು. ಸೊಸೈಟಿಆಫ್‌ಅಬ್ಸ್ಟೆಟ್ರಿಕ್, ಭಾರತ, ಮತ್ತುಡಾ॥ ಕೆ.ರಾಮು, ಮುಖ್ಯಾಧಿಕಾರಿಗಳು, ಆರ್‌ಆರ್ ನರ್ಸಿಂಗ್ ಕಾಲೇಜು ಹಾಗೂ ಉಪಾಧ್ಯಕ್ಷರು, ಟ್ರೆನಡ್ ನರ್ಸಸ್‌ಅಸೊಸಿಯೇಷನ ಆಫ್‌ಇಂಡಿಯಾ (ಕರ್ನಾಟಕ ಶಾಖೆ), ಇವರು ಸಮ್ಮೇಳನದ ಗೌರವ ಅತಿಥಿಗಳಾಗಿ ಆಗಮಿಸಿದ್ದರು. ಕೆ.ಎಲ್.ಇ. ಸ್ವಾಯತ್ತ ವಿಶ್ವವಿದ್ಯಾಲಯ, ನರ್ಸಿಂಗ ಕಾಲೇಜಿನ ಉಪ ಪ್ರಾಂಶುಪಾಲರಾದ ಪ್ರೊ.(ಡಾ). ಸಂಗೀತಾ ಖರಡೆ ಅವರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದ ಎಲ್ಲರಿಗೂ ಧನ್ಯವಾ ದಗಳನ್ನು ಅರ್ಪಿಸಿದರು., ಡೀನ ಪ್ರೊ.(ಡಾ). ಪ್ರೀತಿ ಭೂಪಾಲಿ, ಜಂಟಿ ಸಂಘಟನಾ ಕಾರ್ಯ ದರ್ಶಿ ಡಾ॥ ಆಶಾ ಭಟ್, ಹಾಗು ವಿವಿಧ ಸಂಸ್ಥೆಗಳ ಗಣ್ಯರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

GADI KANNADIGA,kannada daily, printed, published , edited, & woned by murugesh b.shivapuji ,printed ,plot no:12,sy no:174/3b,press colony,kuvempu nagar, post:hindalaga-591108,Tq & Dt:belgaum, And published at plot no:12,sy no:174/3b,press colony,kuvempu nagar,post:hindalaga-591108,Tq & Dt:belgaum, karnataka, RNI NO:KAR KAN/2003/10452. Permission to post at Belagavi, Kacheri post office Belagavi. No:PMG/KA/NK/BM/743/24-26